**All India Radio: Bangalore**
**National Bulletin In Kannada**
**15.07.2026 1.10 p.m.**

ಆಕಾಶವಾಣಿ, ಬೆಂಗಳೂರು

ರಾಷ್ಟ್ರೀಯ ವಾರ್ತೆಗಳು

**15.07.2026 1.10 p.m.**

**<><><><>**

ಮುಖ್ಯಾಂಶಗಳು

1. ಭಾರತ-ಯುಕೆ ಮುಕ್ತ ವ್ಯಾಪಾರ ಒಪ್ಪಂದ: ಕೇಂದ್ರ ಸಚಿವರು ಹಾಗೂ ಕೈಗಾರಿಕಾ ವಲಯದಿಂದ ಪ್ರಶಂಸೆಯ ಮಹಾಪೂರ
2. ಇಂದು ವಿಶ್ವ ಕೌಶಲ್ಯ ದಿನ: ೧೧ ವರ್ಷ ಪೂರೈಸಿದ ಕೌಶಲಾಭಿವೃದ್ಧಿ ಕೇಂದ್ರಿತ ಸ್ಕಿಲ್ ಇಂಡಿಯಾ ಅಭಿಯಾನ
3. ಹೈದರಾಬಾದ್‌ನಲ್ಲಿ ೧೨ನೇ ಬ್ರಿಕ್ಸ್ ಕಾರ್ಮಿಕ ಮತ್ತು ಉದ್ಯೋಗ ಸಚಿವರ ಸಭೆ ಆರಂಭ: ಕೇಂದ್ರ ಸಚಿವ ಡಾ.ಮನ್ಸುಖ್ ಮಾಂಡವೀಯ ಅಧ್ಯಕ್ಷತೆ
4. ಇರಾನ್‌ಗೆ ಅಮೆರಿಕದ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಕಠಿಣ ಎಚ್ಚರಿಕೆ: ಮಾತುಕತೆಗೆ ಬಾರದಿದ್ದರೆ, ಇಂಧನ ಮೂಲಸೌಕರ್ಯಗಳ ಮೇಲೆ ದಾಳಿ
5. ಫಿಫಾ ವಿಶ್ವಕಪ್ ಫುಟ್‌ಬಾಲ್: ಎರಡನೇ ಸೆಮಿಫೈನಲ್‌ನಲ್ಲಿ ಇಂದು ಅರ್ಜೆಂಟೀನಾ-ಇಂಗ್ಲೆಂಡ್ ಸೆಣಸು

<><><><>

ಭಾರತ ಮತ್ತು ಯುಕೆ ನಡುವಿನ ಐತಿಹಾಸಿಕ ಸಮಗ್ರ ಆರ್ಥಿಕ ಮತ್ತು ವ್ಯಾಪಾರ ಒಪ್ಪಂದ-ಸಿಇಟಿಎ ಹಾಗೂ ಸಾಮಾಜಿಕ ಭದ್ರತೆ ಒಪ್ಪಂದವಾದ ದ್ವಿಗುಣ ಕೊಡುಗೆ ಒಪ್ಪಂದ-ಡಿಸಿಸಿ ಇಂದಿನಿಂದ ಅಧಿಕೃತವಾಗಿ ಅನುಷ್ಠಾನಗೊಂಡಿವೆ. ಈ ಒಪ್ಪಂದ, ಯುಕೆ ಮಾರುಕಟ್ಟೆಯಲ್ಲಿ ಶೇಕಡಾ ೯೯ ರಷ್ಟು ಭಾರತೀಯ ಉತ್ಪನ್ನಗಳಿಗೆ ಸಂಪೂರ್ಣ ಸುಂಕ ರಹಿತ ಪ್ರವೇಶ ಕಲ್ಪಿಸಲಿದ್ದು, ಉಭಯ ದೇಶಗಳ ನಡುವಿನ ವ್ಯಾಪಾರ ಮತ್ತು ಹೂಡಿಕೆ ಸಂಬಂಧಗಳಲ್ಲಿ ಹೊಸ ಅಧ್ಯಾಯಕ್ಕೆ ನಾಂದಿ ಹಾಡಲಿದೆ. ಈ ಜನಕೇಂದ್ರಿತ ಒಪ್ಪಂದದಡಿ ಭಾರತದ ಪ್ರಮುಖ ರಫ್ತು ವಲಯಗಳಾದ ಸಂಸ್ಕರಿಸಿದ ಆಹಾರ ಉತ್ಪನ್ನ, ಕಡಲ ಉತ್ಪನ್ನ, ಎಂಜಿನಿಯರಿಂಗ್, ಚರ್ಮ ಹಾಗೂ ಜವಳಿ ಉದ್ಯಮಗಳ ಮೇಲಿದ್ದ ಸುಂಕವನ್ನು ಸಂಪೂರ್ಣವಾಗಿ ರದ್ದುಗೊಳಿಸಲಾಗಿದೆ. ಇದು ಯುಕೆ ಮಾರುಕಟ್ಟೆಯಲ್ಲಿ ಭಾರತೀಯ

ಉತ್ಪನ್ನಗಳ ಸ್ಪರ್ಧಾತ್ಮಕತೆಯನ್ನು ಹೆಚ್ಚಿಸಿ ದೇಶದ ರೈತರು, ಮೀನುಗಾರರು ಮತ್ತು ಎಂಎಸ್‌ಎಂಇ ವಲಯಕ್ಕೆ ಹೊಸ ಅವಕಾಶಗಳನ್ನು ಸೃಷ್ಟಿಸಲಿದೆ. ಇದೇ ವೇಳೆ, ಭಾರತ ತನ್ನ ದೇಶೀಯ ಮಾರುಕಟ್ಟೆಯ ಹಿತಾಸಕ್ತಿಯನ್ನು ಕಾಯ್ದುಕೊಂಡಿದ್ದು, ಡೈರಿ ಉತ್ಪನ್ನಗಳು, ಧಾನ್ಯಗಳು, ಖಾದ್ಯ ತೈಲಗಳು ಸೇರಿದಂತೆ ಪ್ರಮುಖ ಸೂಕ್ಷ್ಮ ವಲಯಗಳಿಗೆ ಒಪ್ಪಂದದ ಅಡಿಯಲ್ಲಿ ಸಂಪೂರ್ಣ ರಕ್ಷಣೆ ಒದಗಿಸಿದೆ.

<><><><>

ಇಂದಿನಿಂದ ಜಾರಿಗೆ ಬಂದಿರುವ ಭಾರತ-ಯುಕೆ ನಡುವಿನ ಮುಕ್ತ ವ್ಯಾಪಾರ ಒಪ್ಪಂದದ ಕುರಿತು ಕೇಂದ್ರ ಸಚಿವರು, ಕೈಗಾರಿಕೆ ಸಂಸ್ಥೆಗಳು, ವ್ಯಾಪಾರ ಮಂಡಳಿಗಳು ಸೇರಿದಂತೆ ಅನೇಕ ಗಣ್ಯರು ಹಾಗೂ ಸಂಸ್ಥೆಗಳಿಂದ ಶ್ಲಾಘನೆ ವ್ಯಕ್ತವಾಗಿದೆ. ಭಾರತ-ಯುಕೆ ಸಂಬಂಧಗಳಲ್ಲಿ ಇಂದಿನ ದಿನವು ಐತಿಹಾಸಿಕ ಮೈಲಿಗಲ್ಲಾಗಿದೆ ಎಂದು ಕೇಂದ್ರ ವಾಣಿಜ್ಯ ಮತ್ತು ಕೈಗಾರಿಕಾ ಸಚಿವ ಪಿಯೂಷ್ ಗೋಯಲ್ ಹೇಳಿದ್ದಾರೆ.  ಈ ಕುರಿತು ಸಾಮಾಜಿಕ ಮಾಧ್ಯಮದಲ್ಲಿ ಸಚಿವರು, ಭಾರತ-ಬ್ರಿಟನ್ ಸಮಗ್ರ ಆರ್ಥಿಕ ಮತ್ತು ವ್ಯಾಪಾರ ಒಪ್ಪಂದ-ಸಿಇಟಿಎ ಹಾಗೂ ಸಾಮಾಜಿಕ ಭದ್ರತಾ ಒಪ್ಪಂದ ಜಾರಿಗೆ ಬಂದಿದ್ದು, ಇದರಿಂದ ಭಾರತದ ಶೇಕಡಾ ೯೯ರಷ್ಟು ರಫ್ತು ಉತ್ಪನ್ನಗಳಿಗೆ ಸುಂಕಮುಕ್ತ ಮಾರುಕಟ್ಟೆ ಪ್ರವೇಶ ದೊರೆಯಲಿದ್ದು, ಉಭಯ ರಾಷ್ಟ್ರಗಳ ನಡುವಿನ ಶೇಕಡಾ ೧೦೦ರಷ್ಟು ವ್ಯಾಪಾರ ಮೌಲ್ಯವು ಈ ಒಪ್ಪಂದದ ವ್ಯಾಪ್ತಿಗೆ ಬರಲಿದೆ ಎಂದು ತಿಳಿಸಿದ್ದಾರೆ. ಈ ಒಪ್ಪಂದ ಭಾರತದ ಆರ್ಥಿಕ ಪ್ರಗತಿ ಮತ್ತು ಜಾಗತಿಕ ಪಾಲುದಾರಿಕೆಗಳನ್ನು ಬಲಪಡಿಸುವಲ್ಲಿ ಪ್ರಮುಖ ಹೆಜ್ಜೆಯಾಗಿದೆ ಎಂದು ರಕ್ಷಣಾ ಸಚಿವ ರಾಜನಾಥ್ ಸಿಂಗ್ ಶ್ಲಾಘಿಸಿದ್ದಾರೆ. ಇದು ರಫ್ತುಗಳನ್ನು ಉತ್ತೇಜಿಸಿ ಎಮ್‌ಎಸ್‌ಎಮ್‌ಇ ಗಳಿಗೆ ಹೊಸ ಅವಕಾಶಗಳನ್ನು ಸೃಷ್ಟಿಸುವುದರ ಜೊತೆಗೆ ಭಾರತೀಯ ಕೈಗಾರಿಕೆಗಳಿಗೆ ಬೆಂಬಲವಾಗಿ ನಿಂತು, ಯುಕೆಯಲ್ಲಿ ಕಾರ್ಯ ನಿರ್ವಹಿಸುತ್ತಿರುವ ವೃತ್ತಿಪರರಿಗೆ ಪ್ರಯೋಜ ತಂದುಕೊಂಡಲಿದೆ ಎಂದು ಸಚಿವರು ತಿಳಿಸಿದ್ದಾರೆ. ಕೇಂದ್ರ ಸಚಿವ ಪ್ರಲ್ಹಾದ್ ಜೋಶಿ, ಈ ಒಪ್ಪಂದ, ದೇಶದ ಆರ್ಥಿಕ ಹಿತಾಸಕ್ತಿಗಳನ್ನು ಕಾಪಾಡಿ ರೈತರು ಹಾಗೂ ಕೃಷಿ ವಲವಯನ್ನು ಸಂರಕ್ಷಿಸಲಿದೆ ಎಂದಿದ್ದಾರೆ. ಭಾರತೀಯ ವಾಣಿಜ್ಯ ಮತ್ತು ಕೈಗಾರಿಕಾ ಮಹಾಸಂಘ- ಎಫ್‌ಐಸಿಸಿಐ, ಪ್ರಧಾನ ಕಾರ್ಯದರ್ಶಿ ಒಪ್ಪಂದವನ್ನು ಸ್ವಾಗತಿಸಿದ್ದು, ಇದು ಜಾಗತಿಕ ಮೌಲ್ಯಸರಪಳಿ ಮತ್ತು ನಾವೀನ್ಯತೆ ಚಾಲಿತ ಬೆಳವಣಿಗೆಯಲ್ಲಿ ಭಾರತದ ಪಾತ್ರವನ್ನು ಮತ್ತಷ್ಟು ಬಲಪಡಿಸಲಿದೆ ಎಂದಿದ್ದಾರೆ.

ಆಸೋಚ್ಯಾಮ್ ಅಧ್ಯಕ್ಷ ನಿರ್ಮಲ್ ಕುಮಾರ್ ಮಿಂಡಾ, ಈ ಒಪ್ಪಂದ ಭಾರತದದ  ಜವಳಿ, ಚರ್ಮ, ಕಡಲಉತ್ಪನ್ನ, ರತ್ನ ಮತ್ತು ಆಭರಣ, ವಿದ್ಯುನ್ಮಾನ ಸರಕು ಮತ್ತು ರಾಸಾಯನಿಕ ವಲಯಗಳಲ್ಲಿ ಲಾಭ ತಂದುಕೊಡಲಿದೆ ಎಂದಿದ್ದಾರೆ. ಭಾರತೀಯ ವ್ಯಾಪಾರ ಉತ್ತೇಜನ ಮಂಡಳಿ ಅಧ್ಯಕ್ಷ ಮೋಹಿತ್ ಸಿಂಗ್ಲಾ ಕೂಡ ಈ ಭಾರತ-ಯುಕೆ ಒಪ್ಪಂದವನ್ನು ಶ್ಲಾಘಿಸಿದ್ದು, ಇದೊಂದು ಮೈಲಿಗಲ್ಲಾಗಿದೆ ಎಂದಿದ್ದಾರೆ.

<><><><>

ದೇಶದ ಯುವಜನರಲ್ಲಿ ಉದ್ಯೋಗಾವಕಾಶ, ಉದ್ಯಮಶೀಲತೆ ಮತ್ತು ಸುಸ್ಥಿರ ಜೀವನೋಪಾಯವನ್ನು ಉತ್ತೇಜಿಸುವ ನಿಟ್ಟಿನಲ್ಲಿ ಹಮ್ಮಿಕೊಳ್ಳಲಾಗಿರುವ 'ಸ್ಕಿಲ್ ಇಂಡಿಯಾ' ಅಭಿಯಾನದ ೧೧ನೇ ವಾರ್ಷಿಕೋತ್ಸವವನ್ನು ಇಂದು ಆಚರಿಸಲಾಗುತ್ತಿದೆ.  ಉದ್ಯಮ ರಂಗಕ್ಕೆ ಪೂರಕವಾದ ಕೌಶಲ್ಯಗಳ ಮೂಲಕ ಯುವಶಕ್ತಿಯನ್ನು ಸಬಲೀಕರಣಗೊಳಿಸುವ ಉದ್ದೇಶದಿಂದ ಪ್ರಧಾನಿ ನರೇಂದ್ರ ಮೋದಿ ಅವರು ೨೦೧೫ರ ಜುಲೈ ೧೫ ರಂದು ಈ ಮಹತ್ವಾಕಾಂಕ್ಷಿ ಅಭಿಯಾನಕ್ಕೆ ಚಾಲನೆ ನೀಡಿದ್ದರು. ಇದರ ಜೊತೆಗೆ ವಿಶ್ವಸಂಸ್ಥೆಯ ಸಾಮಾನ್ಯಸಭೆಯ ೨೦೧೪ರ ಘೋಷಣೆಯ ಅನ್ವಯ, ಯುವಜನರಲ್ಲಿ ಉದ್ಯೋಗಕ್ಕೆ ಅಗತ್ಯವಿರುವ ಕೌಶಲ್ಯಗಳ ಮಹತ್ವವನ್ನು ಸಾರಲು ಜಾಗತಿಕವಾಗಿ ಇಂದು 'ವಿಶ್ವ ಯುವ ಕೌಶಲ್ಯ ದಿನ'ವನ್ನು ಸಹ ಆಚರಿಸಲಾಗುತ್ತಿದೆ. ಕೇಂದ್ರ ಕೌಶಲ್ಯಾಭಿವೃದ್ಧಿ ಮತ್ತು ಉದ್ಯಮಶೀಲತೆ ಸಚಿವಾಲಯವು ತನ್ನ ವಿವಿಧ ಜನಕೇಂದ್ರಿತ ಯೋಜನೆಗಳ ಮೂಲಕ ಇದುವರೆಗೆ ದೇಶದ ೬ ಕೋಟಿಗೂ ಹೆಚ್ಚು ಯುವಜನರನ್ನು ಸಬಲೀಕರಿಸಿದೆ. ಅಭಿಯಾನದ ಅಡಿಯಲ್ಲಿ ಪ್ರತಿವರ್ಷ ೧ ಕೋಟಿಗೂ ಅಧಿಕ ಯುವಕರು ತರಬೇತಿ ಪಡೆಯುತ್ತಿದ್ದು, ಪ್ರಧಾನಮಂತ್ರಿ ಕೌಶಲ್ಯ ವಿಕಾಸ ಯೋಜನೆಯೊಂದರ ಅಡಿಯಲ್ಲೇ ೧ ಕೋಟಿ ೬೫ ಲಕ್ಷಕ್ಕೂ ಹೆಚ್ಚು ಯುವಜನರು ಉದ್ಯೋಗಾಧಾರಿತ ತರಬೇತಿಯನ್ನು ಯಶಸ್ವಿಯಾಗಿ ಪೂರ್ಣಗೊಳಿಸಿದ್ದಾರೆ.

<><><><>

೧೨ನೇ ಬ್ರಿಕ್ಸ್ ಕಾರ್ಮಿಕ ಮತ್ತು ಉದ್ಯೋಗ ಸಚಿವರ ಸಭೆಯು, ಭಾರತದ ಅಧ್ಯಕ್ಷತೆಯಲ್ಲಿ ಇಂದು ಹೈದರಾಬಾದ್‌ನಲ್ಲಿ ಆರಂಭವಾಗಿದೆ. ಕೇಂದ್ರ ಕಾರ್ಮಿಕ ಮತ್ತು ಉದ್ಯೋಗ ಸಚಿವ ಡಾ.ಮನ್ಸುಖ್ ಮಾಂಡವಿಯಾ ಅವರ ಅಧ್ಯಕ್ಷತೆಯಲ್ಲಿ, ರಾಜ್ಯ ಸಚಿವೆ ಶೋಭಾ ಕರಂದ್ಲಾಜೆ ಅವರ ಉಪಸ್ಥಿತಿಯಲ್ಲಿ ನಡೆಯುತ್ತಿರುವ ಉನ್ನತ ಮಟ್ಟದ ಸಭೆಯಲ್ಲಿ, ಸಾಮಾಜಿಕ ಭದ್ರತೆ ವಿಸ್ತರಿಸುವುದು, ಮಹಿಳೆಯರ ಉದ್ಯೋಗ ಪಾಲ್ಗೊಳ್ಳುವಿಕೆ ಹೆಚ್ಚಿಸುವುದು, ಜಾಗತಿಕ ಕೌಶಲ್ಯ ನಕ್ಷೆ ರೂಪಿಸುವುದು ಹಾಗೂ ಗಿಗ್

ಮತ್ತು ವೇದಿಕೆ ಆಧಾರಿತ ಕಾರ್ಮಿಕರ ಕಲ್ಯಾಣಕ್ಕಾಗಿ ಡಿಜಿಟಲ್ ತಂತ್ರಜ್ಞಾನಗಳ ಬಳಕೆಯನ್ನು ಉತ್ತೇಜಿಸುವುದು ಸೇರಿದಂತೆ ವಿವಿಧ ವಿಷಯಗಳ ಕುರಿತು ಚರ್ಚೆ ನಡೆಯುತ್ತಿದೆ.

<><><><>

ಇರಾನ್ ತಕ್ಷಣವೇ ಮಾತುಕತೆಗೆ ಬರದೇ ಇದ್ದಲ್ಲಿ, ಮುಂದಿನ ವಾರದಿಂದ ಇರಾನ್ ಮೇಲಿನ ಮಿಲಿಟರಿ ದಾಳಿಗಳನ್ನು ಮತ್ತಷ್ಟು ತೀವ್ರಗೊಳಿಸುವುದಾಗಿ ಅಮೆರಿಕ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಕಠಿಣ ಎಚ್ಚರಿಕೆ ನೀಡಿದ್ದಾರೆ.

ಮಾಧ್ಯಮ ಸಂದರ್ಶನವೊಂದರಲ್ಲಿ ಮಾತನಾಡಿದ ಅವರು, ಇರಾನ್ ಒಪ್ಪಂದಕ್ಕೆ ಮುಂದಾಗದಿದ್ದರೆ ಅಲ್ಲಿನ ಪ್ರಮುಖ ವಿದ್ಯುತ್ ಸ್ಥಾವರಗಳು, ಸೇತುವೆಗಳು ಹಾಗೂ ಇಂಧನ ಮೂಲಸೌಕರ್ಯಗಳನ್ನು ಗುರಿಯಾಗಿಸಿ ದಾಳಿ ನಡೆಸಲಾಗುವುದು ಮತ್ತು ಅಮೆರಿಕದ ಉದ್ದೇಶಗಳು ಈಡೇರುವವರೆಗೂ ಈ ಕಾರ್ಯಾಚರಣೆ ಮುಂದುವರಿಯಲಿದೆ ಎಂದು ಸ್ಪಷ್ಟಪಡಿಸಿದ್ದಾರೆ. ಪ್ರಸ್ತುತ ಪರಿಸ್ಥಿತಿಯಲ್ಲಿ ಅಮೆರಿಕದೊಂದಿಗೆ ಒಪ್ಪಂದಕ್ಕೆ ಬರುವುದನ್ನು ಬಿಟ್ಟು ಇರಾನ್‌ಗೆ ಬೇರೆ ಆಯ್ಕೆಯಿಲ್ಲ ಎಂದು ಪ್ರತಿಪಾದಿಸಿದ ಅಧ್ಯಕ್ಷ ಟ್ರಂಪ್, ಜಾಗತಿಕ ಆರ್ಥಿಕತೆಗೆ ಧಕ್ಕೆಯಾಗದಂತೆ ತಡೆಯಲು ಇರಾನ್‌ನ ತೈಲ ರಫ್ತು ಕೇಂದ್ರವಾದ 'ಖಾರ್ಗ್ ದ್ವೀಪ'ದ ತೈಲ ಘಟಕಗಳನ್ನು ಸದ್ಯಕ್ಕೆ ಉಳಿಸಿ ದಾಳಿ ನಡೆಸಲಾಗಿದೆ ಎಂದು ಬಹಿರಂಗಪಡಿಸಿದ್ದಾರೆ.

<><><><>

ವಿಶ್ವಸಂಸ್ಥೆಯ ಭದ್ರತಾ ಮಂಡಳಿಯ ಸುಧಾರಣೆ ಕೈಗೊಳ್ಳುವಲ್ಲಿ ವಿಫಲವಾಗಿರುವುದು ಹಾಗೂ ಜಾಗತಿಕ ಸಂಘರ್ಷಗಳನ್ನು ಪರಿಣಾಮಕಾರಿಯಾಗಿ ಎದುರಿಸಲು ಸಾಧ್ಯವಾಗದಿರುವುದರಿಂದ ವಿಶ್ವಸಂಸ್ಥೆಯ ಮೇಲಿನ ಜನರ ವಿಶ್ವಾಸ ಕುಗ್ಗುತ್ತಿದೆ ಎಂದು ಭಾರತ ಅಭಿಪ್ರಾಯಪಟ್ಟಿದೆ. ವಿಶ್ವಸಂಸ್ಥೆಯಲ್ಲಿ ಭವಿಷ್ಯಕ್ಕೆ ಬಹುಪಕ್ಷೀಯ ವ್ಯವಸ್ಥೆಯನ್ನು ಸಜ್ಜುಗೊಳಿಸುವುದರ ಕುರಿತ ಸಚಿವಮಟ್ಟದ ದುಂಡುಮೇಜಿನ ಸಭೆಯಲ್ಲಿ ಮಾತನಾಡಿದ, ವಿಶ್ವಸಂಸ್ಥೆಯಲ್ಲಿನ ಭಾರತದ ಖಾಯಂ ಪ್ರತಿನಿಧಿ ಪಿ.ಹರೀಶ್, ಪ್ರಸ್ತುತ ನಡೆಯುತ್ತಿರುವ ಜಾಗತಿಕ ಸಂಘರ್ಷಗಳಲ್ಲಿ ಭದ್ರತಾ ಮಂಡಳಿ ಮಧ್ಯಪ್ರವೇಶಿಸಲು ವಿಫಲವಾಗಿದೆ. ಇದರಿಂದ ಅಂತಾರಾಷ್ಟ್ರೀಯ ಶಾಂತಿ ಮತ್ತು ಭದ್ರತೆಯನ್ನು ಕಾಪಾಡುವ ಅದರ ಸಾಮರ್ಥ್ಯದ ಬಗ್ಗೆ ಪ್ರಶ್ನೆಗಳು ಉದ್ಭವಿಸಿವೆ ಎಂದು ಹೇಳಿದ್ದಾರೆ. ೮೦ ವರ್ಷಗಳ ಹಿಂದಿನ ವಿಶ್ವಸಂಸ್ಥೆಯ ಆಡಳಿತ ವ್ಯವಸ್ಥೆಯು, ಇಂದಿನ ಜಾಗತಿಕ ಸವಾಲುಗಳನ್ನು ಎದುರಿಸಲು ಸಮರ್ಪಕವಾಗಿಲ್ಲ ಎಂದು ಅವರು ಅಭಿಪ್ರಾಯಪಟ್ಟರು.

<><><><>

ಉಪರಾಷ್ಟ್ರಪತಿ ಹಾಗೂ ರಾಜ್ಯಸಭೆಯ ಸಭಾಪತಿ ಸಿ.ಪಿ.ರಾಧಾಕೃಷ್ಣನ್, ರಾಜ್ಯಸಭೆಗೆ ನೂತನವಾಗಿ ಆಯ್ಕೆಯಾಗಿರುವ ಸದಸ್ಯರಿಗೆ ಇಂದು ಪ್ರಮಾಣವಚನ ಬೋಧಿಸಿದರು. ಪ್ರಮಾಣವಚನ ಸ್ವೀಕರಿಸಿದ ಸದಸ್ಯರಲ್ಲಿ ಕರ್ನಾಟಕದ ಮನ್ಸೂರ್ ಅಲಿ ಖಾನ್ ಹಾಗೂ ಮಧ್ಯಪ್ರದೇಶದ ರಜನೀಶ್ ಕುಮಾರ್ ಅಗರ್ವಾಲ್ ಸೇರಿದ್ದಾರೆ.

<><><><>

ಅಟ್ಲಾಂಟಾದಲ್ಲಿ ಇಂದು ಮಧ್ಯರಾತ್ರಿ ನಡೆಯಲಿರುವ ಫಿಫಾ ವಿಶ್ವಕಪ್ ಫುಟ್‌ಬಾಲ್ ಪಂದ್ಯಾವಳಿಯ ಎರಡನೇ ಸೆಮಿಫೈನಲ್ ಪಂದ್ಯದಲ್ಲಿ, ಹಾಲಿ ಚಾಂಪಿಯನ್ ಅರ್ಜೆಂಟೀನಾ, ಇಂಗ್ಲೆಂಡ್ ತಂಡವನ್ನು ಎದುರಿಸಲಿದೆ. ಪಂದ್ಯ ಭಾರತೀಯ ಕಾಲಮಾನ ಮಧ್ಯರಾತ್ರಿ ೧೨.೩೦ಕ್ಕೆ ಆರಂಭವಾಗಲಿದೆ. ಈ ಪಂದ್ಯದಲ್ಲಿ ಗೆಲ್ಲುವ ತಂಡ, ಫೈನಲ್ ಪಂದ್ಯದಲ್ಲಿ ಸ್ಪೇನ್ ತಂಡದ ವಿರುದ್ಧ ಪ್ರಶಸ್ತಿಗಾಗಿ ಸೆಣಸಲಿದೆ. ಅಮೆರಿಕದ ಟೆಕ್ಸಾಸ್‌ನ ಡಲ್ಲಾಸ್ ಕ್ರೀಡಾಂಗಣದಲ್ಲಿ ಕಳೆದ ರಾತ್ರಿ ನಡೆದ ಪಂದ್ಯಾವಳಿಯ ಮೊದಲ ಸೆಮಿಫೈನಲ್ ಪಂದ್ಯದಲ್ಲಿ ಸ್ಪೇನ್ ತಂಡ ಫ್ರಾನ್ಸ್ ವಿರುದ್ಧ ೨-೦ ಗೋಲುಗಳ ಅಂತರದ ಭರ್ಜರಿ ಜಯ ಸಾಧಿಸುವ ಮೂಲಕ ಫಿಫಾ ವಿಶ್ವಕಪ್-೨೦೨೬ರ ಫೈನಲ್‌ಗೆ ಲಗ್ಗೆ ಇಟ್ಟಿದೆ.

<><> ಇಲ್ಲಿಗೆ ವಾರ್ತಾ ಪ್ರಸಾರ ಮುಕ್ತಾಯವಾಯಿತು <><>